ಶ್ರೀ ಜೆ. ಪುಟ್ಟಸ್ವಾಮಿಗೌಡ (ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು).—

ಅ) ಸದರಿ ಸೇತುವೆಯು ಬಹಳ ಹಳೆಯದಾಗಿದ್ದರೂ, ಇನ್ನೂ ಸುಸ್ಥಿತಿಯಲ್ಲಿದೆ.

ಆ) ಸೇತುವೆಯ ವಾಹನ ಮಾರ್ಗವು ಕೇವಲ ಹದಿನೆಂಟು ಅಡಿಗಳು ಮಾತ್ರವಿದ್ದು ಏಕಮುಖ ವಾಹನ ಸಂಚಾರಕ್ಕೆ ಯೋಗ್ಯವಾಗಿದೆ.

ಇ) ಈ ಸೇತುವೆಯ ಪುನರ್ ನಿರ್ಮಾಣದ ಕಾರ್ಯವನ್ನು ಬೆಂಗಳೂರು ತಿಲಿಚಿರಿ ರಸ್ತೆ ನ್ಯಾಷನಲ್ ಹೈವೇಗೆ ಸೇರಿಸಲು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದೆ. ಆಗ ಈ ಸೇತುವೆಯನ್ನು ಸಹ ಪುನರ್ ನಿರ್ಮಾಣ ಮಾಡಲಾಗುತ್ತದೆ.

ಲೋಕೋಪಯೋಗಿ ಇಲಾಖೆಯಲ್ಲಿ [ನಡೆಯುತ್ತಿರುವ ಭ್ರಷ್ಟಾಚಾರ.

೩೫೫. ಪ್ರೊ ಎಂ. ಡಿ. ನಂಜುಂಡಸ್ವಾಮಿ (ಧಾರವಾಡ ಗ್ರಾಮಾಂತರ).— ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಹಾಗೂ ಇಂಧನ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಲೋಕೋಪಯೋಗಿ ಮತ್ತು ನೀರಾವರಿ ಇಲಾಖೆಯಲ್ಲಿ ಕೆಲಸ ಮಾಡದೆ ಹಣ ಪಾವತಿ ತೆಗೆದುಕೊಂಡಿರುವ ಸಂಗತಿಗಳು ಸರ್ಕಾರದಪರ ಗಮನಕ್ಕೆ ಬಂದಿವೆಯೇ ?

ಆ) ಹಾಗಿದ್ದಲ್ಲಿ ಈ ಬಗ್ಗೆ ತಪ್ಪಿತಸ್ಥರ ಮೇಲೆ ತೆಗೆದುಕೊಂಡ ಕ್ರಮಗಳೇನು ?

ಶ್ರೀ ಜೆ. ಪುಟ್ಟಸ್ವಾಮಿಗೌಡ (ನೀರಾವರಿ ಮತ್ತು ಲೋಕೋಪಯೋಗಿ ಸಚಿವರು).—

ಅ) ಲೋಕೋಪಯೋಗಿ ಮತ್ತು ನೀರಾವರಿ ಇಲಾಖೆಯಲ್ಲಿ ಕೆಲಸ ಮಾಡದೆ ಹಣ ಪಾವತಿ ತೆಗೆದುಕೊಂಡಿರುವ ಸಂಗತಿಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಕೊಪ್ಪಳ ತಾಲ್ಲೂಕಿನ ಹಿರೇಹಳ್ಳ ಯೋಜನೆ ಬಗ್ಗೆ

೩೫೭. ಶ್ರೀ ಎಂ. ಬಿ. ದಿವಟರ (ಕೊಪ್ಪಳ).— ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಹಾಗೂ ಇಂಧನ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕೊಪ್ಪಳ ತಾಲ್ಲೂಕಿನಲ್ಲಿ ಹಿರೇಹಳ್ಳ ಯೋಜನೆಯ ಕೆಲಸವನ್ನು ಎಂದಿನಿಂದ ಪ್ರಾರಂಭ ಮಾಡಲಾಯಿತು ;

ಆ) ಈ ಯೋಜನೆ ಕಾರ್ಯಗತವಾಗುವಲ್ಲಿ ವಿಳಂಬವಾಗುತ್ತಿರುವುದು ಸರಕಾರದವರ ಗಮನಕ್ಕೆ ಬಂದಿದೆಯೇ ;

ಇ) ಹಾಗಿದ್ದಲ್ಲಿ ಈ ಯೋಜನೆಯನ್ನು ಶೀಘ್ರವೆ ಕಾರ್ಯಗತ ಮಾಡಲು ಸರ್ಕಾರವು ವಿಶ್ವಬ್ಯಾಂಕ್ ನೆರವನ್ನು ಪಡೆಯಲು ಪ್ರಯತ್ನಿಸುವುದೆ ;

ಈ) ಎಷ್ಟು ಅವಧಿಯಲ್ಲಿ ಈ ಯೋಜನೆಯು ಪೂರ್ಣವಾಗುವುದು ?

ಶ್ರೀ ಜೆ. ಪುಟ್ಟಸ್ವಾಮಿಗೌಡ (ಲೋಕೋಪಯೋಗಿ, ಕೂಡಾ ಮತ್ತು ನೀರಾವರಿ ಸಚಿವರು).—

ಅ) ೧೯೭೭ನೇ ಸಾಲಿನಲ್ಲಿ ಪ್ರಾರಂಭ ಮಾಡಲಾಯಿತು.

ಆ) ಬಂದಿವೆ.

ಇ) ಪರಿಶೀಲನೆಯಲ್ಲಿರುವುದಿಲ್ಲ.

ಈ) ಒಂಭತ್ತನೇ ಪಂಚವಾರ್ಷಿಕ ಯೋಜನೆಯ ಅಂತ್ಯದಲ್ಲಿ ಪೂರ್ಣಗೊಳಿಸುವ ಕಾರ್ಯಕ್ರಮವಿದೆ.